



ಅರುಣ ಪಿ. ಭಟ್ಟ

## ವಾರಭವಿಷ್ಯ: 06.06.2024ರಿಂದ 12.06.2024ರವರೆಗೆ




ವಿವೇಚನೆಯಿಂದ ಕಾರ್ಯಗಳಲ್ಲಿ ಪಾಲ್ಗೊಳ್ಳಿ. ಕೆಲವರ ಮಾತನ್ನು ನಂಬಿ ನಷ್ಟದ ವ್ಯವಹಾರದಲ್ಲಿ ಪಾಲ್ಗೊಳ್ಳುವ ಸಾಧ್ಯತೆ ಇದೆ, ಎಚ್ಚರವಿರಲಿ. ಸಹೋದರರ ವಿಶ್ವಾಸ ಪಡೆಯಲು ಪ್ರಯತ್ನಿಸುವುದು ಸೂಕ್ತ. ನಿಮ್ಮ ಬಹುಕಾಲದ ವ್ಯಾಜ್ಯಗಳಿಗೆ ಸೂಕ್ತ ಪರಿಹಾರಗಳು ದೊರಕಲಿವೆ. ಈ ವಾರ ಮೋಜು ಮಸ್ತಿಗಳಿಗಾಗಿ ವಿಶೇಷ ಆಮಂತ್ರಣಗಳು ಹೆಚ್ಚಾಗುವ ಸಾಧ್ಯತೆ ಇದೆ. ಶುಭದಿನ 10. ವಿಷ್ಣು ಸಹಸ್ರನಾಮ ಪಠಿಸಿರಿ.




ನಿರುದ್ಯೋಗಿಗಳಿಗೆ ಉದ್ಯೋಗದ ಅವಕಾಶ ಕಂಡುಬರಲಿದೆ. ಬ್ಯಾಂಕಿಂಗ್ ವ್ಯವಹಾರ ಯೋಜಿತವಾಗಿ ನಡೆಯಲಿದೆ. ಕಷ್ಟದ ಕಾರ್ಯಗಳನ್ನು ಅನಾಯಾಸವಾಗಿ ಮಾಡಿ ಮುಗಿಸಲಿದ್ದೀರಿ. ಕುಟುಂಬದಲ್ಲಿ ಶುಭಸುದ್ದಿ ಬರಲಿದೆ. ಅವಿವಾಹಿತರಿಗೆ ವಿವಾಹದ ಯೋಗ. ಆಪ್ತರಿಗೆ ಉಡುಗೊರೆ ನೀಡುವ ಸಾಧ್ಯತೆ ಇದೆ. ವಿದ್ಯಾರ್ಥಿಗಳಿಗೆ ಹಲವು ಅಡ್ಡಿ ಆತಂಕ ಎದುರಾಗಲಿದೆ. ಶುಭದಿನ 11. ಹನುಮಾನ್ ಚಾಲೀಸ್ ಪಠಿಸಿರಿ.




ಆತ್ಮೀಯ ವ್ಯಕ್ತಿಗಳೊಡನೆ ವಿವಾದಗಳು ಹೆಚ್ಚಾಗಬಹುದು. ಭೂಮಿಗೆ ಸಂಬಂಧಪಟ್ಟಂತಹ ವ್ಯಾಜ್ಯಗಳಿಂದ ನಿಮ್ಮ ಮನಸ್ಥಿತಿ ಹಾಳಾಗಬಹುದು. ಅನಗತ್ಯವಾಗಿ ಮಾತಿನಲ್ಲಿ ಏನಾದರೂ ಹೇಳಿ ಸಿಲುಕಬೇಡಿ. ಕೆಲಸದ ವಿಷಯದಲ್ಲಿ ಸಮಸ್ಯೆ ಉದ್ಭವವಾಗಲಿದೆ. ಆದಷ್ಟು ಸಮಸ್ಯೆಗಳನ್ನು ಆ ಕ್ಷಣದಲ್ಲೇ ಬಗೆಹರಿಸಲು ಪ್ರಯತ್ನಿಸಿ. ಒತ್ತಡದಿಂದ ಖಿನ್ನತೆ ಆವರಿಸಲಿದೆ. ಶುಭದಿನ 09. ಗಣಪತಿಗೆ ದೂರ್ವಾರ್ಚನೆ ಮಾಡಿಸಿರಿ.




ಯೋಜಿತ ಕಾರ್ಯಗಳಲ್ಲಿ ವ್ಯವಸ್ಥಿತವಾದ ಕಾರ್ಯಶೈಲಿ ಕಂಡುಬರುತ್ತದೆ. ಧನಾಗಮನ ವ್ಯವಸ್ಥೆ ಸರಾಗವಾಗಿ ನಡೆಯಲಿದೆ. ಲೇವಾದೇವಿ ವ್ಯವಹಾರಗಳಿಂದ ದೂರವಿರುವುದು ಲೇಸು. ಪ್ರೇಕ್ಷಣೀಯ ಸ್ಥಳಗಳಿಗೆ ಭೇಟಿ ನೀಡುವ ಸಾಧ್ಯತೆ ಇದೆ. ಕುಟುಂಬದ ಜೊತೆಗೆ ಹೆಚ್ಚಿನ ಕಾಲ ಕಳೆಯಲಿದ್ದೀರಿ. ಆತ್ಮೀಯರೊಡನೆ ಮನಸ್ತಾಪ ಆಗದಂತೆ ನೋಡಿಕೊಳ್ಳುವುದು ಒಳ್ಳೆಯದು. ಶುಭದಿನ 12. ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ಜನಪ್ರಿಯತೆ ಹೆಚ್ಚಾದಂತೆ ವಿರೋಧಿಗಳು ಹೆಚ್ಚಾಗಲಿದ್ದಾರೆ. ನಿಮ್ಮ ಪ್ರತಿಯೊಂದು ಕಾರ್ಯಗಳಿಗೂ ತೊಂದರೆ ನೀಡುವ ವ್ಯಕ್ತಿಗಳನ್ನು ಗುರುತಿಸಿ ಆದಷ್ಟು ದೂರವಿಡುವುದು ಒಳ್ಳೆಯದು. ವೈಯಕ್ತಿಕ ವಿಚಾರಗಳನ್ನು ಯಾರೊಂದಿಗೂ ಹಂಚಿಕೊಳ್ಳಬೇಡಿ. ಆರ್ಥಿಕ ವಿಷಯದಲ್ಲಿ ಸಂತೃಪ್ತಿಯ ಭಾವನೆ ಮೂಡಲಿದೆ. ಶೈಕ್ಷಣಿಕ ಕ್ಷೇತ್ರದಲ್ಲಿ ಉತ್ತಮವಾದ ಪ್ರಗತಿ ಇದೆ. ಶುಭದಿನ 09. ಲಕ್ಷ್ಮೀ ನಾರಾಯಣ ಹೃದಯ ಪಾರಾಯಣ ಮಾಡಿರಿ.




ಬಹುಮುಖ್ಯ ಕೆಲಸವನ್ನು ನೀವು ಮರೆತುಬಿಡಬಹುದು, ಆದಷ್ಟು ಕಾರ್ಯಗಳ ಬಗ್ಗೆ ಸೂಕ್ತ ಮುತುವರ್ಜಿ ವಹಿಸಿ. ಆರೋಗ್ಯದ ಹಿತದೃಷ್ಟಿಯನ್ನು ಮನಗಾಣಿರಿ. ಹೆಚ್ಚಿನ ಕೆಲಸ ಹಾಗೂ ಹೊಸ ಆದಾಯ ಮಾರ್ಗ ಕಂಡುಬರಲಿದೆ. ಉದ್ಯೋಗ ಭರವಸೆ ತರಲಿದೆ. ಆದಾಯ ಹೆಚ್ಚಳವಾಗಿದ್ದರೂ ಖರ್ಚುಗಳು ವಿಪರೀತವಾಗಲಿವೆ. ವ್ಯಾಜ್ಯವೊಂದಕ್ಕೆ ಶ್ರಮ ಹಾಕಲಿದ್ದೀರಿ. ಶುಭದಿನ 08. ಆದಿತ್ಯ ಹೃದಯ ಪಠಿಸಿರಿ.




ವ್ಯವಹಾರದ ನಿಮಿತ್ತ ತಿರುಗಾಟ ಹೆಚ್ಚಾಗಬಹುದು. ಆರ್ಥಿಕವಾಗಿ ಬಳಲುವಿಕೆ ಈ ವಾರ ಕಂಡುಬರಲಿದೆ. ಸಾಲದ ಬಾಧೆ ನಿಮ್ಮ ಸಮಸ್ಯೆಗಳಿಗೆ ಮತ್ತಷ್ಟು ಸಂಕಷ್ಟ ತಂದೊಡ್ಡಲಿದೆ. ವ್ಯವಹಾರದಲ್ಲಿ ಅಲಕ್ಷತನ ಹೆಚ್ಚಾಗಬಹುದು. ಕಟ್ಟಡ ಕಾಮಗಾರಿಗಳಲ್ಲಿ ಹಣಕಾಸಿನ ಕುಂದುಕೊರತೆ ಕಾಡಲಿದೆ. ದೈವ ಸಂಕಲ್ಪದ ಮೊರೆಹೋಗುವ ಸಾಧ್ಯತೆ ಕಂಡು ಬರಲಿದೆ. ಶುಭದಿನ 07. ಚಂಡಿ ಪಾರಾಯಣ ಮಾಡಿರಿ.




ವಾರದ ಆರಂಭದಿಂದಲೇ ನಿಮ್ಮ ಕೆಲಸಗಳಿಗೆ ವೇಗ ನೀಡುತ್ತೀರಿ. ನಿಮ್ಮ ಕಾರ್ಯಗಳನ್ನು ಅಂತಿಮಗೊಳಿಸಲು ನೆರವು ದೊರೆಯುತ್ತದೆ. ನಿಮ್ಮ ಕೆಲಸ ಇನ್ನಷ್ಟು ಪರಿಣಾಮಕಾರಿಯಾಗಿ ಮಾಡಲು ಸಾಧ್ಯವಾಗುತ್ತದೆ. ವೈವಾಹಿಕ ಜೀವನ ಸಂತಸದಾಯಕವಾಗಿರುತ್ತದೆ. ಚರ್ಚಾಕೂಟಗಳಲ್ಲಿ ಪಾಲ್ಗೊಳ್ಳಲಿದ್ದೀರಿ. ವಿದ್ಯಾರ್ಥಿಗಳಿಗೆ ಉತ್ತಮ ನಿರೀಕ್ಷೆಗಳು ಮೂಡಲಿವೆ. ಶುಭದಿನ 06. ಶ್ರೀ ಲಕ್ಷ್ಮೀ ನರಸಿಂಹ ಪಂಚರತ್ನ ಓದಿರಿ.




ಮಾನಸಿಕ ಕ್ಲೇಶಗಳು ನಿಮ್ಮ ಅಭಿವೃದ್ಧಿಗೆ ಮಾರಕವಾಗಬಹುದು. ಕುಟುಂಬದಲ್ಲಿ ಅಶಾಂತಿಯ ವಾತಾವರಣ ಗೋಚರವಾಗಲಿದೆ. ಕೆಲವು ವ್ಯಕ್ತಿಗಳಿಂದ ನಿಮ್ಮ ಕಾರ್ಯಗಳಲ್ಲಿ ಹಸ್ತಕ್ಷೇಪ ಕಂಡುಬರುತ್ತದೆ. ವ್ಯಾವಹಾರಿಕ ಕ್ಷೇತ್ರದಲ್ಲಿ ಹಿನ್ನಡೆ ಆಗಬಹುದು. ಕೌಟುಂಬಿಕ ಜೀವನದಲ್ಲಿ ನಿಮ್ಮ ಜವಾಬ್ದಾರಿಗಳು ಹೆಚ್ಚಾಗಲಿವೆ. ಧಾರ್ಮಿಕ ಕ್ಷೇತ್ರಗಳಿಗೆ ಭೇಟಿ ನೀಡುವ ಸಾಧ್ಯತೆಗಳಿವೆ. ಶುಭದಿನ 08. ಕಾಲಭೈರವನ ಸೇವೆ ಮಾಡಿರಿ.




ಉದ್ಯೋಗದಲ್ಲಿ ಉತ್ತಮ ಸ್ಥಾನಮಾನ ಸಿಗಲಿದೆ. ಸಹವರ್ತಿಗಳು ನಿಮ್ಮ ಯೋಜನೆಗಳಿಗೆ ಬೆಂಬಲ ನೀಡಲಿದ್ದಾರೆ. ದಾಂಪತ್ಯದಲ್ಲಿ ಪ್ರೀತಿಯ ಮನಸ್ಥಿತಿಯಿಂದ ಇರಲಿದ್ದೀರಿ. ಕೋರ್ಟ್ ವ್ಯವಹಾರಗಳು ನಿಮ್ಮ ಪರವಾಗಿ ಆಗುವ ಸಾಧ್ಯತೆ ಇದೆ. ಸಹೋದ್ಯೋಗಿಗಳ ಜೊತೆ ಮುಖ್ಯವಾದ ಚರ್ಚೆ ನಡೆಸಲಿದ್ದೀರಿ. ಉದ್ಯೋಗ ಸ್ಥಳದಲ್ಲಿ ನಿರೀಕ್ಷಿತ ಯಶಸ್ಸು ಸಾಧಿಸಲಿದ್ದೀರಿ. ಶುಭದಿನ 07. ಸೌಂದರ್ಯ ಲಹರಿ ಪಠಿಸಿರಿ.




ಅಪರಿಚಿತ ವ್ಯಕ್ತಿಗಳಿಂದ ನಿಮ್ಮ ಯೋಜನೆಗಳಲ್ಲಿ ನಷ್ಟವಾಗಬಹುದು. ನಂಬಿಕೆ ದ್ರೋಹ ಎದುರಿಸಬಹುದು ಎಚ್ಚರದಿಂದಿರಿ. ವಾಹನದಲ್ಲಿ ಜಾಗ್ರತೆ ವಹಿಸುವುದು ಸೂಕ್ತ. ನಿಮ್ಮ ಕೆಲಸಗಳಿಗೆ ತಾಳ್ಮೆ ಅತ್ಯವಶ್ಯಕವಾಗಿದೆ. ವಾರಾಂತ್ಯದಲ್ಲಿ ದೈಹಿಕ ಆಯಾಸ, ಆರೋಗ್ಯ ಸಮಸ್ಯೆಗಳು ಕಾಡಬಹುದು. ಹಣಕಾಸಿನ ವೆಚ್ಚ ಹೆಚ್ಚಾಗಲಿದೆ. ಯಾವುದೇ ವಿಚಾರದಲ್ಲಿ ನಿರ್ಲಕ್ಷ್ಯ ಮಾಡಬೇಡಿ. ಶುಭದಿನ 10. ಕನಕಧಾರಾ ಸ್ತೋತ್ರ ಪಠಿಸಿರಿ.




ಯೋಜನೆಗಳ ಫಲಿತಾಂಶ ವಿಳಂಬವಾಗುವ ಸಾಧ್ಯತೆ ಇದೆ. ಕೆಲಸ ಕಾರ್ಯಗಳಲ್ಲಿ ನಿಮ್ಮ ಪಾಲ್ಗೊಳ್ಳುವಿಕೆ ಉತ್ತಮವಾಗಲಿದೆ. ಸ್ನೇಹಿತರ ಜೊತೆಗೆ ಉತ್ತಮ ಬಾಂಧವ್ಯವನ್ನು ಬೆಳೆಸಿಕೊಳ್ಳಲು ಮುಂದಾಗಿ. ನೀವು ಮಾಡಿದ ಒಳ್ಳೆಯ ಕೆಲಸಕ್ಕೆ ಮನ್ನಣೆ ಲಭಿಸಲಿದೆ. ಕೌಟುಂಬಿಕ ಜೀವನ ಆರಾಮವಾಗಿ ಇರುತ್ತದೆ. ನಿಮ್ಮ ಯಶಸ್ಸು ಕಂಡು ಪೋಷಕರು ಸಂತೋಷ ಪಡುತ್ತಾರೆ. ಶುಭದಿನ 11. ಚಂಡಿ ಪಾರಾಯಣ ಮಾಡಿರಿ.